| ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 651 |
| ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18.08.2025 |
| ಉತ್ತರಿಸುವವರು | ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹಳ್ಳಿಗಳಲ್ಲಿ ಅರಣ್ಯ ಜಮೀನು ಅಕ್ರಮಿಸಿ ಮನೆ ಕಟ್ಟಿಕೊಳುತ್ತಿರುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿರುವುದನ್ನು ಸರ್ಕಾರ ಪತ್ತೆ ಹಚ್ಚಿದೆಯೇ; ಇದನ್ನು ತಡೆಗಟ್ಟಲು ಕಟ್ಟುತ್ತಿರುವ ಕಟ್ಟಡಗಳ ಕಾರ್ಯ ನಿಲ್ಲಿಸಲು ಅರಣ್ಯ ಇಲಾಖೆ ಮುಂದಾಗದಿರಲು ಕಾರಣಗಳೇನು; | ಅರಣ್ಯ ಒತ್ತುವರಿ ಆಗದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ ಹಾಗೂ ನಿರಂತರವಾಗಿ ಅರಣ್ಯಗಡಿಯುದ್ದಕ್ಕೂ ಗಸ್ತು ತಿರುಗಲಾಗುತ್ತದೆ. ಯಾವುದೇ ರೀತಿಯ ಅನಧಿಕೃತವಾಗಿ ಕಟ್ಟಡಗಳನ್ನು ಕಟ್ಟಲು ಅವಕಾಶ ನೀಡಲಾಗುತ್ತಿಲ್ಲ. |
| ಆ) | ಅನೇಕ ಕಡೆ ಪ್ರಕರಣಗಳನ್ನು ಆಯಾ ತಾಲ್ಲೂಕಿನ ಅರಣ್ಯ ಅಧಿಕಾರಿಗಳ ಗಮನಕ್ಕೆ ತಂದಾಗ ಅವರ ಮೇಲೆ ಎಫ್.ಐ.ಆರ್ ಹಾಕಲಾಗಿದೆ ಎಂದು ಹೇಳಿ ಅವರು ಕಟ್ಟಡ ನಿರ್ಮಾಣ ಮುಂದುವರಿಸಲು ಅವಕಾಶ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಅರಣ್ಯ ಭೂಮಿ ಉಳಿಸಲು ಏನು ಕ್ರಮ ಜರುಗಿಸಲಾಗಿದೆ: | ಪ್ರಥಮ ತನಿಖಾ ವರದಿ ದಾಖಲಿಸಿದ ನಂತರ ಕಟ್ಟಡ ನಿರ್ಮಾಣ ಮಾಡಲು ಮುಂದುವರೆಸಿದ್ದಲ್ಲಿ, ಕಾನೂನಾತ್ಮಕ ಕ್ರಮಕೈಗೊಳ್ಳಲಾಗುತ್ತಿದೆ ಹಾಗೂ ಯಾವುದಾದರೂ ಪ್ರಕರಣದಲ್ಲಿ ಅರಣ್ಯಾಧಿಕಾರಿಗಳು ಪ್ರಥಮ ತನಿಖಾ ವರದಿ ದಾಖಲಿಸಿದ ನಂತರ ಕಟ್ಟಡ ನಿರ್ಮಾಣ ಮಾಡಲು ಅವಕಾಶ ನೀಡಿದ್ದಲ್ಲಿ ಅಂತಹ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು. |
| ಇ) | ಪ್ರತಿ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) | ಅರಣ್ಯ ಭೂಮಿ ರಕ್ಷಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>➢ ಕ್ಷೇತ್ರ ಮಟ್ಟದ ಸಿಬ್ಬಂದಿ ಅರಣ್ಯ ಗಡಿಗಳಲ್ಲಿ ನಿರಂತರವಾಗಿ ಗಸ್ತು ಕಾರ್ಯ ನಿರ್ವಹಿಸುತ್ತಾರೆ.<br>➢ ಅತಿಕ್ರಮಣಗಳನ್ನು ಪತ್ತೆಹಚ್ಚಲು, ಕರ್ನಾಟಕ ಅರಣ್ಯ ಇಲಾಖೆಯು ಉಪಗ್ರಹ ಕಣ್ಗಾವಲು ವ್ಯವಸ್ಥೆ (ಫಾರೆಸ್ಟ್ ಕವರ್ ಚೇಂಜ್ ಅಲರ್ಟ್ ಸಿಸ್ಟಮ್) ಎಂಬ ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಇದರಲ್ಲಿ ಉಪಗ್ರಹ ಚಿತ್ರಗಳ ವಿಶ್ಲೇಷಣೆಯ ಆಧಾರದ ಮೇಲೆ ಕ್ಷೇತ್ರ ಅಧಿಕಾರಿಗಳಿಗೆ ತಕ್ಷಣವೇ SMS ಮೂಲಕ ಎಚ್ಚರಿಕೆಗಳನ್ನು ನೀಡಲಾಗುತ್ತಿದೆ.<br>➢ ಅರಣ್ಯ ಭೂಮಿ ಒತ್ತುವರಿ ಮಾಡಿಕೊಂಡವರ ವಿರುದ್ಧ ಅರಣ್ಯ ಅಪರಾಧ ಮೊಕದ್ದಮೆ ದಾಖಲಿಸಲಾಗುತ್ತದೆ.<br>➢ ಒತ್ತುವರಿಯಾದ ಅರಣ್ಯ ಭೂಮಿಯನ್ನು ಇಲಾಖೆಗೆ ಹಿಂಪಡೆಯಲು ಕರ್ನಾಟಕ ಅರಣ್ಯ ಕಾಯ್ದೆ 1963 ರ ಕಲಂ-64(ಎ)ರಡಿ ತೆರವು ಕಾರ್ಯಾಚರಣೆ ನಿರಂತರ ಪ್ರಕ್ರಿಯೆಯಾಗಿರುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ➤ ಅರಣ್ಯ ಪ್ರದೇಶದ ಗಡಿ ಬಲವರ್ಧನೆಗಾಗಿ ಅವಶ್ಯಕತೆಗನುಗುಣವಾಗಿ ಜಾನುವಾರು ನಿರೋಧಕ ಕಂದಕ ನಿರ್ಮಾಣ, ಚೈನ್ ಲಿಂಕ್ ಮೆಶ್ ಅಳವಡಿಕೆ, ತಂತಿಬೇಲಿ ಅಳವಡಿಕೆ, ಆರ್.ಸಿ.ಸಿ ಪಿಲ್ಲರ್ ಗಳ ಅಳವಡಿಕೆ, ಕಾಂಪೌಂಡ್ ವಾಲ್ ನಿರ್ಮಾಣ, ಪ್ರೀ ಕಾಸ್ಟ್ ಕಾಂಪೌಂಡ್ ವಾಲ್ ನಿರ್ಮಾಣ ಮಾಡಲಾಗುತ್ತಿದೆ. |
| ಈ) | ಈಗಾಗಲೇ ಅರಣ್ಯ ಭೂಮಿಯಲ್ಲಿ ಅಕ್ರಮವಾಗಿ ಕಟ್ಟಡ, ಮನೆ ಕಟ್ಟುತ್ತಿರುವ ಹಾಗೂ ಮನೆ ನಿರ್ಮಿಸಿಕೊಂಡಿರುವವರ ಮನೆ ಸಕ್ರಮ ಮಾಡಲಾಗುವುದೇ ಅಥವಾ ಅವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ಅರಣ್ಯ ಭೂಮಿ ಉಳಿಸಿಕೊಳ್ಳಲಾಗುವುದೇ? | ಅರಣ್ಯ ಭೂಮಿಯಲ್ಲಿ ಅಕ್ರಮವಾಗಿ ಕಟ್ಟಡ, ಮನೆ ಕಟ್ಟುತ್ತಿರುವ ಹಾಗೂ ಮನೆ ನಿರ್ಮಿಸಿಕೊಂಡಿರುವವರ ಮನೆ ಸಕ್ರಮ ಮಾಡಿಕೊಳ್ಳಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ ಹಾಗೂ ಅನಧಿಕೃತ ಒತ್ತುವರಿ ಮಾಡಿಕೊಂಡಿದ್ದಲ್ಲಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 64ಎ ಪ್ರಕಾರ ಕ್ರಮ ಕೈಗೊಂಡು ಒತ್ತುವರಿ ತೆರವಿಗೆ ಎಲ್ಲಾ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: **FEE/125/FGL/2025**

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು.